ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ    ದಿನಾಂಕ : DATE : 20/02/2

# ಮಹಾರಾಷ್ಟ್ರದಲ್ಲಿ 2 ಹೊಸ ಕೊರೋನಾ ಪ್ರಭೇದ ಪತ್ತೆ

## ಯವತ್ಮಾಳ್, ಅಮರಾವತಿ ಜಿಲ್ಲೆಗಳಲ್ಲಿ ಕಂಡುಬಂದಿದೆ ರೂಪಾಂತರಿ ವೈರಸ್
## ಇವುಗಳಿಗೆ ದೇಶದಲ್ಲಿನ ಪ್ರತಿಕಾಯ ಶಕ್ತಿಗಳನ್ನೂ ಭೇದಿಸುವ ತಾಕತ್ತು: ತಜ್ಞರು
## ಕೊರೋನಾದಿಂದ ಗುಣರಾದವರೂ ಪುನಃ ಸೋಂಕಿಗೆ ಒಳಗಾಗಬಹುದು

**ಪುಣೆ:** ಕೊರೋನಾ ದ್ವಿತೀಯ ಅಲೆಯ ಆತಂಕಕ್ಕೆ ಒಳಗಾಗಿರುವ ಮಹಾರಾಷ್ಟ್ರದಿಂದ ಇನ್ನೊಂದು ಆತಂಕಕಾರಿ ಸಮಾಚಾರ ಹೊರಬಿದ್ದಿದೆ. ರಾಜ್ಯದ ಯವತ್ಮಾಳ್ ಹಾಗೂ ಅಮರಾವತಿ ಜಿಲ್ಲೆಗಳಲ್ಲಿ ಕೊರೋನಾದ 2 ಹೊಸ ರೂಪಾಂತರಿ ಪ್ರಭೇದಗಳು ಪತ್ತೆಯಾಗಿವೆ.

ಕೊರೋನಾ ಪ್ರತಿಕಾಯ ಶಕ್ತಿಗಳನ್ನೂ ಭೇದಿಸಿ ಹೋಗುವ ಸಾಮರ್ಥ್ಯ ಈ ಹೊಸ ತಳಿಗೆ ಇವೆ. ಇದು ಆತಂಕಕಾರಿ ವಿಷಯವಾಗಿದೆ.



ಆದರೆ ಇವುಗಳ ಜೆನೆಟಿಕ್ ಸೀಕ್ವೆನ್ಸಿಂಗ್ ಮಾಡಿದಾಗ ಇವು ಬ್ರಿಟನ್, ಬ್ರೆಜಿಲ್ ಹಾಗೂ ದಕ್ಷಿಣ ಆಫ್ರಿಕಾದಲ್ಲಿ ಪತ್ತೆಯಾದ ಥರದ ಹೊಸ ಕೊರೋನಾ ವೈರಸ್ ತಳಿಗಳಲ್ಲ ಎಂದು ತಜ್ಞರು ಸ್ಪಷ್ಟಪಡಿಸಿದ್ದಾರೆ.

**ಎಲ್ಲಿ ಪತ್ತೆ?:** ಅಮರಾವತಿ ಹಾಗೂ ಯವತ್ಮಾಳ್‌ಗಳಲ್ಲಿ ಇತ್ತೀಚೆಗೆ ಕೊರೋನಾ ಪ್ರಕರಣಗಳು ದಿಢೀರ್ ಹೆಚ್ಚಾಗಿವೆ. ಈ ಹಿನ್ನೆಲೆಯಲ್ಲಿ 24 ಸ್ಯಾಂಪಲ್‌ಗಳನ್ನು ತಪಾಸಣೆ ಮಾಡಲಾಯಿತು. ಇವುಗಳಲ್ಲಿ ಅಮರಾವತಿ, ಯವತ್ಮಾಳ್, ಸತಾರಾ ಜಿಲ್ಲೆಗಳ ತಲಾ 4 ಹಾಗೂ ಪುಣೆಯಲ್ಲಿನ 12 ಸ್ಯಾಂಪಲ್‌ಗಳು ಸೇರಿದ್ದವು ಎಂದು ಪುಣೆ ಬಿಜೆ ಮೆಡಿಕಲ್ ಕಾಲೇಜಿನ ಮೈಕ್ರೋಬಯಾಲಜಿ ವಿಭಾಗದ ಮುಖ್ಯಸ್ಥ ಡಾ| ರಾಜೇಶ್ ಕಾರ್ಯಕರ್ತೆ ಹೇಳಿದ್ದಾರೆ.

ಎಲ್ಲ ಸ್ಯಾಂಪಲ್‌ಗಳಲ್ಲಿ ಡಿ614ಜಿ ಎಂಬ ಸಾಮಾನ್ಯ ಕೊರೋನಾ ಪ್ರಭೇದ ಪತ್ತೆಯಾಗಿದೆ. ಆದರೆ ಅಮರಾವತಿಯಲ್ಲಿ ಇ484ಕೆ ಪ್ರಭೇದ ಪತ್ತೆಯಾಗಿದೆ. ಇದೂ ಕೂಡ ಸಾಮಾನ್ಯ ಪ್ರಭೇದ. ಆದರೂ, ಈ ಪ್ರಭೇದಕ್ಕೆ ಪ್ರತಿಕಾಯ ಶಕ್ತಿಗಳಲ್ಲೂ ಹಾದು ಹೋಗುವ ತಾಕತ್ತು ಇದೆ ಎಂಬ ಅಂಶ ದೃಢಪಟ್ಟಿದೆ. ಯವತ್ಮಾಳ್‌ನಲ್ಲಿ ಎನ್440ಕೆ ಪ್ರಭೇದ ಸಿಕ್ಕಿದ್ದು, ಇದು ಆಂಧ್ರಪ್ರದೇಶದಲ್ಲಿನ ಸಾಮಾನ್ಯ ಪ್ರಭೇದ. ಆದರೂ ದಿಲ್ಲಿಯಲ್ಲಿ ಮರುಸೋಂಕು ಸೃಷ್ಟಿಸಿದ್ದು ಇದೇ ಪ್ರಭೇದವಾಗಿದ್ದು, ಇದರಿಂದ ಒಮ್ಮೆ ಗುಣಮುಖರಾದವರೂ ಪುನಃ ಸೋಂಕಿಗೆ ಒಳಗಾಗಬಹುದು ಎಂದು ಕಂಡುಬಂದಿದೆ.

# ಮತ್ತಷ್ಟು ಮಹಾ ಕೊರೋನಾ ನಿರ್ಬಂಧ

## ನಾಗಪುರದಲ್ಲಿ ಸಭೆ, ಹೋಟೆಲ್‌ಗಳಲ್ಲಿ ಶೇ.50ರ ಮಿತಿ

**ಮುಂಬೈ:** ಮಹಾರಾಷ್ಟ್ರದಲ್ಲಿ ಕೊರೋನಾ ವೈರಸ್‌ನ 2ನೇ ಅಲೆ ಏಳುವ ಭೀತಿ ಕಾಣುತ್ತಿರುವ ಹಿನ್ನೆಲೆಯಲ್ಲಿ ಮತ್ತಷ್ಟು ಕಠಿಣ ನಿರ್ಬಂಧಗಳನ್ನು ಶುಕ್ರವಾರದಿಂದ ಜಾರಿಗೊಳಿಸಲಾಗಿದೆ. ನಾಗಪುರದಲ್ಲಿ ಏಕಾಏಕಿ ಕೊರೋನಾ ಪ್ರಕರಣಗಳು ಏರುವ ಕಾರಣ ಹೋಟೆಲ್‌ಗಳಲ್ಲಿ ಹಾಗೂ ಸಮಾರಂಭ ಸ್ಥಳಗಳಲ್ಲಿ ಶೇ.50ರಷ್ಟು ಮಾತ್ರ ಜನರನ್ನು ಸೇರಿಸಬೇಕು. ಅಂತ್ಯಕ್ರಿಯೆಗೆ 20 ಜನರು ಮಾತ್ರ ಸೇರಬೇಕು ಎಂಬ ನಿರ್ಬಂಧ ವಿಧಿಸಲಾಗಿದೆ.

ಇನ್ನೊಂದೆಡೆ 5ಕ್ಕಿಂತ ಹೆಚ್ಚು ಕೊರೋನಾ ಪ್ರಕರಣ ವರದಿಯಾದರೆ ಅಂಥ ಕಟ್ಟಡಗಳನ್ನು ಸೀಲ್ ಮಾಡಲು ನಿರ್ಧರಿಸಲಾಗಿದೆ. ನಾಗಪುರದಲ್ಲಿ ಗುರುವಾರ ಒಂದೇ ದಿನ 644 ಕೋವಿಡ್-19 ಪ್ರಕರಣಗಳು ದೃಢಪಟ್ಟಿದ್ದು, ನಗರವನ್ನು ಆತಂಕಕ್ಕೆ ಸಿಕ್ಕಿಸಿದೆ. ಗುರುವಾರ ಯವತ್ಮಾಳ್, ಅಮರಾವತಿ ನಗರದಲ್ಲಿ ಲಾಕ್‌ಡೌನ್ ಘೋಷಿಸಲಾಗಿತ್ತು.

### ಪಾರ್ಟಿ: 500 ಮೇಲೆ ಕೇಸ್

**ಥಾಣೆ:** ಡೊಂಬಿವಿಲಿಯಲ್ಲಿ ಕೊರೋನಾ ನಿಯಮಗಳನ್ನು ಉಲ್ಲಂಘಿಸಿ ಜನ್ಮದಿನಾಚರಣೆ ಮಾಡುತ್ತಿದ್ದ 500 ಮಂದಿಯ ಮೇಲೆ ಪ್ರಕರಣ ದಾಖಲಿಸಲಾಗಿದೆ. ಇವರು ಮಾಸ್ಕ್ ಹಾಕದೇ ಹಾಗೂ ಸಾಮಾಜಿಕ ಅಂತರ ಕಾಯದೇ ಇವರು ಜನ್ಮದಿನಾಚರಣೆಯಲ್ಲಿ ಪಾಲ್ಗೊಂಡಿದ್ದರು.

### ಮಾಸ್ಕ್ ಮಾತ್ರ ನಮ್ಮ ರಕ್ಷಕ

**ಪುಣೆ:** 'ಛತ್ರಪತಿ ಶಿವಾಜಿ ಮಹಾರಾಜರು ಖಡ್ಗ ಹಾಗೂ ಗುರಾಣಿ ಹಿಡಿದು ಹೋರಾಡುತ್ತಿದ್ದರು. ಆದರೆ ಇಂದು ಕೊರೋನಾ ವಿರುದ್ಧದ ಯುದ್ಧದಲ್ಲಿ ಹೋರಾಡಲು ಮಾಸ್ಕ್ ಮಾತ್ರ ನಮ್ಮ ಗುರಾಣಿ' ಎಂದು ಮಹಾರಾಷ್ಟ್ರ ಮುಖ್ಯಮಂತ್ರಿ ಉದ್ಧವ್ ಠಾಕ್ರೆ ಹೇಳಿದ್ದಾರೆ.

# ಮಹಾರಾಷ್ಟ್ರ 4 ಸಚಿವರಿಗೆ ಕೊರೋನಾ

## ಎನ್‌ಸಿಪಿ ನಾಯಕ ಖಾಡ್ಸೆ, ಬಿಜೆಪಿ ಸಂಸದೆ ರಕ್ಷಾಗೂ ಸೋಂಕು

**ಮುಂಬೈ:** ಕೊರೋನಾ ವೈರಸ್‌ನ 2ನೇ ಅಲೆಯ ಆತಂಕಕ್ಕೆ ಕಾರಣವಾಗಿರುವ ಮಹಾರಾಷ್ಟ್ರದಲ್ಲಿ ಮುಖ್ಯಮಂತ್ರಿ ಉದ್ಧವ ಠಾಕ್ರೆ ಅವರ ಮಂತ್ರಿಮಂಡಲದ ಅನೇಕ ಸಚಿವರಿಗೆ ಹಾಗೂ ರಾಜಕೀಯ ಮುಖಂಡರಿಗೆ ಏಕಕಾಲದಲ್ಲಿ ಸೋಂಕು ತಗುಲಿದೆ. ಸಚಿವರಾದ ಓಂಪ್ರಕಾಶ್ ಕಡು, ರಾಜೇಶ್ ಟೋಪೆ, ಜಯಂತ ಪಾಟೀಲ್, ರಾಜೇಂದ್ರ ಶಿಂಗಣೆ ಅವರಿಗೆ ಕಳೆದ 2-3 ದಿನಗಳಲ್ಲಿ ಕೊರೋನಾ ಬಂದಿದೆ. ಇತ್ತೀಚೆಗೆ ಗೃಹ ಸಚಿವ ಅನಿಲ್ ದೇಶಮುಖ್ ಅವರಿಗೂ ಸೋಂಕು ತಗುಲಿದೆ.

ಇನ್ನು ಎನ್‌ಸಿಪಿ ನಾಯಕ, ಏಕನಾಥ ಖಡ್ಸೆ, ಅವರ ಸೊಸೆ ಹಾಗೂ ಬಿಜೆಪಿ ಸಂಸದೆ ರಕ್ಷಾ ಖಡ್ಸೆ ಅವರೂ ತಮಗೆ ಕೊರೋನಾ ಸೋಂಕು ತಗುಲಿರುವುದನ್ನು ದೃಢಪಡಿಸಿದ್ದಾರೆ.